**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ______ ದಿನಾಂಕ : DATE: ______

**ಇಂದಿನಿಂದ ಅಧಿವೇಶನ | 7 ದಿನಗಳ ಕಾಲ ಕಲಾಪ**

# ಕಲಾಪವನ್ನು ಕಾಡಲಿದೆ ಕೃಷಿ ಕಾಯಿದೆ, ಜಿಲೆಟಿನ್ ಸ್ಫೋಟ

**ಬೆಂಗಳೂರು:** ರಾಜ್ಯ ವಿಧಾನಮಂಡಲ ಅಧಿವೇಶನ ಗುರುವಾರದಿಂದ ಪ್ರಾರಂಭವಾಗಲಿದ್ದು, ಜಂಟಿ ಸದನ ಉದ್ದೇಶಿಸಿ ರಾಜ್ಯಪಾಲರು ಭಾಷಣ ಮಾಡಲಿದ್ದಾರೆ.

ಸಂಪುಟ ವಿಸ್ತರಣೆ ಬಳಿಕ ಖಾತೆ ಹಂಚಿಕೆಯಲ್ಲಿ ಮೂರು ಬಾರಿ ಬದಲಾವಣೆ ಮಾಡಲಾಗಿದೆ. ಈ ನಡುವೆಯೂ ಕೆಲ ಸಚಿವರು ಸಮಾಧಾನಗೊಂಡಿಲ್ಲ, ಇದರ ನಡುವೆ ಅಧಿವೇಶನ ಪ್ರಾರಂಭವಾಗುತ್ತಿದೆ.

ಮತ್ತೊಂದೆಡೆ ಕೃಷಿ ಸಂಬಂಧಿತ ಕಾಯಿದೆ ಜಾರಿ ಮತ್ತು ದೇಶಾದ್ಯಂತ ನಡೆದ ರೈತರ ಪ್ರತಿಭಟನೆಗಳ ಮೇಲೆ ಪ್ರಮುಖವಾಗಿ ಬೆಳಕು ಚೆಲ್ಲುವ ಸಾಧ್ಯತೆ ಇದೆ. ಮುಖ್ಯಮಂತ್ರಿ ತವರು ಜಿಲ್ಲೆಯಾದ ಶಿವಮೊಗ್ಗದಲ್ಲಿ ಜಿಲೆಟಿನ್ ಸ್ಫೋಟದ ನಂತರ ಬಯಲಾಗುತ್ತಿರುವ ಅಕ್ರಮ ಗಣಿಗಾರಿಕೆಗಳು ಈಗಾಗಲೇ ರಾಜಕೀಯ ಕೆಸರೆರಚಾಟಕ್ಕೆ ನಾಂದಿಯಾಗಿದೆ. ಅವಿಶ್ವಾಸ ವಿಚಾರದಲ್ಲಿ ವಿಧಾನಪರಿಷತ್‌ನಲ್ಲಿ ನಡೆದ ಉಪಸಭಾಪತಿಯವರ ಎಳೆದಾಟ ಮತ್ತು ಆ ನಂತರದ ದಿನಗಳಲ್ಲಿ ಅವರ ಆತ್ಮಹತ್ಯೆ ಘಟನೆ ಗಂಭೀರ ಚರ್ಚೆಗೆ ಒಳಗಾಗುವ ಸಾಧ್ಯತೆ ಇದೆ. ಎಫ್‌ಡಿಎ ಪ್ರಶ್ನೆ ಪತ್ರಿಕೆ ಸೋರಿಕೆಯಿಂದ ನೊಂದ ಸಾವಿರಾರು ಅಭ್ಯರ್ಥಿಗಳ ನೋವು ಸೇರಿದಂತೆ ಅನೇಕ ವಿಚಾರಗಳ ಬಗ್ಗೆ ಸರಕಾರದ ವಿರುದ್ಧ ವಾಗ್ದಾಳಿ ನಡೆಸಲು ಪ್ರತಿಪಕ್ಷಗಳು ಸಜ್ಜಾಗಿವೆ.

ಜನವರಿ 28ರಿಂದ ಫೆಬ್ರವರಿ 5ರ ವರೆಗೆ ಈ ಬಾರಿಯ ವಿಧಾನಮಂಡಲ ಅಧಿವೇಶನ ನಿಗದಿಯಾಗಿದೆ. ಈ ಅವಧಿಯಲ್ಲಿ 7 ದಿನಗಳ ಕಾಲ ಕಲಾಪ ನಡೆಯಲಿದೆ. ಗುರುವಾರ ಬೆಳಗ್ಗೆ 11ಕ್ಕೆ ರಾಜ್ಯಪಾಲರು ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಳಿಕ ಅಗಲಿದ ಗಣ್ಯರಿಗೆ ವಿಧಾನಸಭೆಯಲ್ಲಿ ಸಂತಾಪ ಸೂಚಿಸಲಾಗುತ್ತದೆ.

**ಕೋವಿಡ್ ಮುಂಜಾಗ್ರತಾ ಕ್ರಮ**

ಈ ಬಾರಿಯ ಅಧಿವೇಶನದಲ್ಲೂ ಕೋವಿಡ್ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗುತ್ತಿದೆ. ಅದರಂತೆ ಶಾಸಕರು, ಅಧಿಕಾರಿಗಳು ಹಾಗೂ ಕಲಾಪದ ವರದಿ ಮಾಡುವ ಮಾಧ್ಯಮ ಪ್ರತಿನಿಧಿಗಳು ಮಾಸ್ಕ್ ಧರಿಸುವುದು ಕಡ್ಡಾಯ. ಸಾಮಾಜಿಕ ಅಂತರವನ್ನೂ ಕಾಯ್ದುಕೊಳ್ಳಬೇಕಾಗುತ್ತದೆ ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ(ಎರಡನೇ ತಿದ್ದುಪಡಿ) ವಿಧೇಯಕ ಸೇರಿದಂತೆ ಸುಗ್ರೀವಾಜ್ಞೆ ಹೊರಡಿಸಲಾಗಿರುವ 3 ವಿಧೇಯಕಗಳನ್ನು ಈ ಬಾರಿ ಸದನದಲ್ಲಿ ಮಂಡಿಸಲಾಗುತ್ತದೆ. ಉಳಿದಂತೆ ಪ್ರಶ್ನೋತ್ತರ, ಶೂನ್ಯವೇಳೆ, ಗಮನ ಸೆಳೆಯುವ ಸೂಚನೆ, ನಿಲುವಳಿ ಸೂಚನೆ, ನಿಯಮ 69ರ ಸೂಚನೆ, ಖಾಸಗಿ ಸದಸ್ಯರ ಕಾರ್ಯಕಲಾಪಕ್ಕೆ ಅವಕಾಶ ಇರುತ್ತದೆ ಎಂದು ಹೇಳಿದರು. ಈ ಮಧ್ಯೆ ರಾಜಭವನಕ್ಕೆ ತೆರಳಿ ರಾಜ್ಯಪಾಲ ವಿ.ಆರ್. ವಾಲಾ ಅವರನ್ನು ಭೇಟಿಯಾದ ಸ್ಪೀಕರ್ ಜಂಟಿ ಸದನ ಉದ್ದೇಶಿಸಿ ಭಾಷಣ ಮಾಡಲು ಆಗಮಿಸುವಂತೆ ಆಮಂತ್ರಣ ನೀಡಿದರು.

**ಗೋಹತ್ಯೆ ನಿಷೇಧ ವಿಧೇಯಕ ಬಾಕಿ**

ಈ ನಡುವೆ ಗೋಹತ್ಯೆ ನಿಷೇಧ ಕುರಿತ ವಿಧೇಯಕ ಪರಿಷತ್‌ನಲ್ಲಿ ಮಂಡನೆಯಾಗುವುದು ಬಾಕಿಯಿದೆ. ಈ ವಿಧೇಯಕ ಸಂಬಂಧ ಈಗಾಗಲೇ ಸುಗ್ರೀವಾಜ್ಞೆ ಹೊರಡಿಸಲಾಗಿದೆ. ಪರಿಷತ್‌ನಲ್ಲಿ ಈ ಬಾರಿ ವಿಧೇಯಕ ಮಂಡಿಸಲಾಗುತ್ತದೆ. ಇದು ಸಾಕಷ್ಟು ವಾಗ್ವಾದಕ್ಕೆ ಎಡೆಮಾಡಿಕೊಡುವ ಎಲ್ಲ ಸಾಧ್ಯತೆಯೂ ಇದೆ.



**ತಿಕ್ಕಾಟ ತರಲಿರುವ ವಿಷಯ**

- ಶಿವಮೊಗ್ಗ ಜಿಲೆಟಿನ್ ಸ್ಫೋಟ
- ಪರಿಷತ್ ಸಭಾಪತಿ ಗಲಾಟೆ
- ಕೃಷಿ ಸಂಬಧಿತ ಕಾಯಿದೆ
- ಎಫ್‌ಡಿಎ ಪ್ರಶ್ನೆ ಪತ್ರಿಕೆ ಸೋರಿಕೆ

**ಸಕ್ರಿಯ ಹಾಜರಿಗೆ ಸಿಎಂ ಸೂಚನೆ**

ಕಲಾಪದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸರಕಾರದ ಪರ ನಿಲ್ಲುವಂತೆ ಆಡಳಿತಾರೂಢ ಬಿಜೆಪಿ ಶಾಸಕರಿಗೆ ಸಿಎಂ ಬಿ.ಎಸ್. ಯಡಿಯೂರಪ್ಪ ಈಗಾಗಲೇ ಸೂಚಿಸಿದ್ದಾರೆ. ತಮ್ಮ ಇಲಾಖೆ ಯೋಜನೆಗಳ ಬಗ್ಗೆ ಪೂರ್ಣ ಮಾಹಿತಿಯೊಂದಿಗೆ ಸದನಕ್ಕೆ ಹಾಜರಾಗುವಂತೆ ಸಂಪುಟದ ಸದಸ್ಯರಿಗೆ ನಿರ್ದೇಶನ ನೀಡಿದ್ದಾರೆ.

**ಕಾಂಗ್ರೆಸ್‌ನಿಂದ ರಣ ತಂತ್ರ**

ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ನೇತೃತ್ವದಲ್ಲಿ ಸಿಎಲ್‌ಪಿ ಸಭೆ ಗುರುವಾರ ಬೆಳಗ್ಗೆ ನಡೆಯಲಿದೆ. ಸರಕಾರದ ವಿಫಲತೆ, ವರ್ಗಾವಣೆ, ಹಿರಿಯ ಅಧಿಕಾರಿಗಳ ಟ್ವೀಟರ್ ಸಮರ ಇತ್ಯಾದಿ ಪ್ರಮುಖ ವಿಚಾರದಲ್ಲಿ ಸರಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವ ತಂತ್ರ ರೂಪಿಸಲಿದೆ. ಜೆಡಿಎಸ್‌ನಿಂದಲೂ ಕುಮಾರ ಸ್ವಾಮಿ ನೇತೃತ್ವದಲ್ಲಿ ಕಾರ್ಯತಂತ್ರ ರೂಪಿಸಲಾಗುತ್ತಿದೆ.